# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** **ದಿನಾಂಕ:31.07.2020**

## ಸ್ವಾತಂತ್ರ್ಯ ದಿನಾಚರಣೆ ಸಮಾರಂಭ ಆಚರಣೆ ಕುರಿತು ಪೂರ್ವಭಾವಿ ಸಿದ್ಧತಾ ಸಭೆ ಹಾಗೂ ಮಾನ್ಯ ಆಯುಕ್ತರು ರವರ ಸುದ್ದಿ ಗೋಷ್ಠಿ:

### ಸ್ವಾತಂತ್ರ್ಯ ದಿನಾಚರಣೆ ಪೂರ್ವಸಿದ್ಧತಾ ಸಭೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 2020ರ ರಾಜ್ಯಮಟ್ಟದ ಸ್ವಾತಂತ್ರ್ಯ ದಿನಾಚರಣೆ ಸಮಾರಂಭ ಆಚರಣೆ ಕುರಿತು ಇಂದು ಮಾನ್ಯ ಆಯುಕ್ತರು ರವರ ಅಧ್ಯಕ್ಷತೆಯಲ್ಲಿ ಪಾಲಿಕೆ ಕೇಂದ್ರ ಕಛೇರಿ ಸಭಾಂಗಣ-01ರಲ್ಲಿ ಸಭೆ ನಡೆಯಿತು. ಈ ವೇಳೆ ಮಾನ್ಯ ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಗಳು ಶ್ರೀ ಶಿವಮೂರ್ತಿ, ವಿಶೇಷ ಆಯುಕ್ತರು(ಆಡಳಿತ) ಶ್ರೀ ಅನ್ಬುಕುಮಾರ್, ಉಪ ಆಯುಕ್ತರು(ಆಡಳಿತ) ಶ್ರೀ ಲಿಂಗಮೂರ್ತಿ, ಪೂರ್ವ ವಲಯ ಜಂಟಿ ಆಯುಕ್ತರು ಶ್ರೀಮತಿ ಪಲ್ಲವಿ, ಪೂರ್ವ ವಲಯ ಮುಖ್ಯ ಅಭಿಯಂತರರು ಶ್ರೀ ಪ್ರಭಾಕರ್, ಪೊಲೀಸ್ ಹಾಗೂ ಇತರೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಯ ಉಪಸ್ಥಿತರಿದ್ದರು.

ಕೋವಿಡ್-19 ಹಿನ್ನೆಲೆ ಕೇಂದ್ರ ಸರ್ಕಾರದ ನಿರ್ಧಾರಗಳ ಪ್ರಕಾರ ಆಗಸ್ಟ್ 15ರಂದು ನಡೆಯಲಿವ ರಾಜ್ಯಮಟ್ಟದ ಸ್ವಾತಂತ್ರ್ಯ ದಿನಾಚರಣೆ ಸಮಾರಂಭದಲ್ಲಿ ಸಾರ್ವಜನಿಕರ ಪ್ರವೇಶ ನಿಷೇಧಿಸಲಾಗಿದ್ದು, ಯಾವುದೇ ರೀತಿಯ ಸಾಂಸ್ಕೃತಿಕ ಕಾರ್ಯಕ್ರಮ, ಪರೇಡ್(ಮಾರ್ಚ್‌ಪಾಸ್ಟ್) ಇರದೆ ಅತ್ಯಂತ ಸರಳವಾಗಿ ಸಮಾರಂಭವನ್ನು ಆಚರಣೆ ಮಾಡಲಾಗುತ್ತದೆ ಎಂದು ಆಯುಕ್ತರು ತಿಳಿಸಿದರು.

ಸಭೆ ಮುಗಿದ ಬಳಿಗ ಸುದ್ದಿಗಾರರೊಂದಿಗೆ ಮಾತನಾಡಿದ ಆಯುಕ್ತರು, ಹಿಂದಿನ ವರ್ಷಕ್ಕೆ ಹೋಲಿಕೆ ಮಾಡಿದರೆ, ಈ ಬಾರಿ ಹಲವಾರು ಬದಲಾವಣೆಗಳನ್ನು ಮಾಡಿಕೊಳ್ಳಲಾಗಿದೆ. ಆಗಸ್ಟ್ 15ರಂದು ಸನ್ಮಾನ್ಯ ಮುಖ್ಯಮಂತ್ರಿಗಳು ಬೆಳಗ್ಗೆ 9.00 ಗಂಟೆಗೆ ಧ್ವಜಾರೋಹಣ ಮಾಡಲಿದ್ದಾರೆ. ಪ್ರತಿ ವರ್ಷ ಧ್ವಜಾರೋಹಣ ಆದ ಬಳಿಕ ಮುಖ್ಯಮಂತ್ರಿಗಳು ತುಕಡಿಗಳ ತಪಾಸಣೆ ನಡೆಸುತ್ತಿದ್ದರು. ಆದರೆ, ಈ ಬಾರಿ ತುಕಡಿಗಳ ತಪಾಸಣೆ ಇರುವುದಿಲ್ಲ. ನೇರವಾಗಿ ಭಾಷಣ ಮಾಡಲಾಗುತ್ತದೆ. ಯಾವುದೇ ರೀತಿಯ ಮಾರ್ಚ್‌ಪಾಸ್ಟ್, ಸಾಂಸ್ಕೃತಿಕ ಕಾರ್ಯಕ್ರಮವಾಗಲಿ, ಹೆಲಿಕಾಪ್ಟರ್ ಮೂಲಕ ಪುಷ್ಪಾರ್ಚನೆ ಮಾಡುವುದಾಗಲಿ ಇರುವುದಿಲ್ಲ. ಮುಖ್ಯಮಂತ್ರಿಗಳ ಭಾಷಣ ಮುಗಿದ ನಂತರ ನಾಡಗೀತೆ, ರೈತ ಗೀತೆ, ಎರಡು ದೇಶಭಕ್ತಿ ಗೀತೆಗಳು ಮಾತ್ರ ಇರಲಿವೆ ಎಂದರು.

ಈ ಬಾರಿ ವಿಶೇಷವಾಗಿ ಸಮಾರಂಭಕ್ಕೆ 75 ಮಂದಿ ಕೊರೋನಾ ವಾರಿಯರ್ಸ್ ಹಾಗೂ 25 ಮಂದಿ ಕೋವಿಡ್ ಸೋಂಕಿನಿಂದ ಗುಣಮುಖರಾದವರನ್ನು ಆಹ್ವಾನಿಸಲಾಗುತ್ತಿದ್ದು, ಪ್ರತ್ಯೇಕ ಹಾಸನಗಳ ವ್ಯವಸ್ಥೆ ಮಾಡಲಾಗುತ್ತದೆ. ಜೊತೆಗೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಮಾತ್ರ ಸೀಮಿತಗೊಳಿಸಿ, ಸುಮಾರು 200 ಮಂದಿ ಮೀರದಂತೆ ಸಾಮಾಜಿಕ ಅಂತರವನ್ನು ಕಾಯ್ದುಕೊಂಡು ಸಮಾರಂಭವನ್ನು ಸರಳವಾಗಿ ಆಯೋಜನೆ ಮಾಡಲಾಗುತ್ತದೆ ಎಂದು ಹೇಳಿದರು.

ಸಮಾರಂಭಕ್ಕೆ ಬರುವವರೆಲ್ಲರಿಗೂ ರ್‍ಯಾಪಿಡ್ ಆಂಟಿಜೆನ್ ಟೆಸ್ಟ್(RAT) ಮಾಡಲು ಕಿಯೋಸ್ಕ್‌ಗಳ ವ್ಯವಸ್ಥೆ ಮಾಡಲಾಗುತ್ತದೆ. ಅಲ್ಲದೆ ಆ ದಿನ ಸಮಾರಂಭಕ್ಕೆ ಬರುವವರೆಲ್ಲರೂ ಕಡ್ಡಾಯವಾಗಿ ಮಾಸ್ಕ್(ಮುಖಗವಸು) ಧರಿಸಿರಬೇಕು. ಮುಖ್ಯದ್ವಾರಗಳ ಬಳಿ ಪಾಲಿಕೆ ಸಿಬ್ಬಂದಿಯನ್ನು ನಿಯೋಜನೆ ಮಾಡಿ ಬರುವವರೆಲ್ಲರಿಗೂ ಥರ್ಮಲ್ ಸ್ಕ್ಯಾನಿಂಗ್ ಹಾಗೂ ಪಲ್ಸ್ ಆಕ್ಸಿಮೀಟರ್ ನಲ್ಲಿ ತಪಾಸಣೆ ಮಾಡುವುದು ಹಾಗೂ ಸ್ಯಾನಿಟೈಸರ್ ವ್ಯವಸ್ಥೆ ಮಾಡಲಾಗಿರುತ್ತದೆ.

## ಗೌರಿ-ಗಣೇಶ ಹಬ್ಬ ಆಚರಣೆ:

ಆಗಸ್ಟ್ 21 ಹಾಗೂ 22 ರಂದು ಗೌರಿ-ಗಣೇಶ ಹಬ್ಬವಿದ್ದು, ಪ್ರತಿ ವರ್ಷ ವಿಜೃಂಭಣೆಯಿಂದ ಆಚರಣೆ ಮಾಡಲಾಗುತ್ತಿತ್ತು. ಈ ಬಾರಿ ಕೋವಿಡ್ ಇರುವ ಪರಿಣಾಮ ಸಾರ್ವಜನಿಕ ಸ್ಥಳಗಳನ್ನು ಗಣೇಶ ಮೂರ್ತಿಗಳನ್ನು ಇಡುವುದನ್ನು ನಿಷೇಧ ಮಾಡಲಾಗಿದ್ದು, ಎಲ್ಲಿಯೂ ಗಣೇಶ ಮೂರ್ತಿಗಳನ್ನು ಇಡುವಂತಿಲ್ಲ. ಕರೆ, ಕಲ್ಯಾಣಿ, ಟ್ಯಾಂಕ್‌ಗಳಲ್ಲಿ ವಿಸರ್ಜನೆ ಮಾಡಲು ಅನುಮತಿ ನೀಡುವುದಿಲ್ಲ. ಮನೆಯಲ್ಲೇ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನಿಟ್ಟು ಪೂಜಿಸಿ, ಮನೆಯಲ್ಲೇ ವಿಸರ್ಜನೆ ಮಾಡಿಕೊಳ್ಳಬೇಕಾಗುತ್ತದೆ ಎಂದು ಆಯುಕ್ತರು ರವರು ತಿಳಿಸಿದರು.

ಕೇಂದ್ರ ಸರ್ಕಾರವು ಈಗಾಗಲೇ ಅನ್‌ಲಾಕ್ 03 ಗೌಡ್‌ಲೆನ್ಸ್ ನೀಡಿದ್ದು, ಅದರಲ್ಲಿ ಯಾವುದೇ ಹಬ್ಬ, ಗುಂಪುಗೂಡವ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವಂತಿಲ್ಲ ಎಂದು ಸ್ಪಷ್ಟಪಡಿಸಿದೆ. ಆ ಬಗ್ಗೆ ರಾಜ್ಯ ಸರ್ಕಾರದಿಂದಲೂ ಆದೇಶ ಹೊರಡಿಸಲಾಗಿದೆ. ಸಾರ್ವಜನಿಕವಾಗಿ ಗಣೇಶ ಮೂರ್ತಿಗಳನ್ನಿಟ್ಟು ಪೂಜಿಸಿದರೆ ಹೆಚ್ಚು ಜನ ಸೇರುತ್ತಾರೆ. ಆದ್ದರಿಂದ ಕಡ್ಡಾಯವಾಗಿ ಸಾರ್ವಜನಿಕ ಸ್ಥಳದಲ್ಲಿ ಆಚರಿಸುವುದನ್ನು ನಿಷೇಧಿಸಲಾಗಿರುತ್ತದೆ. ವ್ಯಾಪಾರ ಮಾಡಲು ಯಾವುದೇ ನಿರ್ಬಂಧವಿರುವುದಿಲ್ಲ. ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಮೂಲಕ ವ್ಯಾಪಾರ-ವಹಿವಾಟು ನಡೆಸಿಕೊಳ್ಳಬಹುದು. ನಿಯಮ ಉಲ್ಲಂಘಿಸಿ ಸಾರ್ವಜನಿಕ ಸ್ಥಳದಲ್ಲಿ ಪ್ರತಿಷ್ಠಾಪನೆ ಮಾಡಿದಲ್ಲಿ, ವಿಪತ್ತು ನಿರ್ವಹಣಾ ಕಾಯ್ದೆ ಅಡಿ ಕ್ರಮ ಕೈಗೊಳ್ಳುತ್ತೇವೆ. ಅದನ್ನು ಸಾರ್ವಜನಿಕರು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕಾಗುತ್ತದೆ ಎಂದು ಹೇಳಿದರು.

## ಬಕ್ರೀದ್ ಆಚರಣೆ:

ಬಕ್ರೀದ್ ಆಚರಣೆ ದಿನದಂದು ಸಾಮೂಹಿಕ ಪ್ರಾರ್ಥನೆ ಮಾಡುವುದು ವಕ್ಫ್ ಬೋರ್ಡ್ ನಿಂದಲೇ ನಿಷೇಧಿಸಲಾಗಿರುತ್ತದೆ. ಈ ಸಮಯದಲ್ಲಿ ಮೇಕೆ, ಕುರಿ ಸೇರಿದಂತೆ ಇನ್ನಿತರ ಪ್ರಾಣಿವಧೆ ಮಾಡುವುದನ್ನು ಕೂಡಾ ನಿರ್ಭಂಧಿಸಲಾಗಿರುತ್ತದೆ.

## ಖಾಸಗಿ ಆಸ್ಪತ್ರೆಗಳಲ್ಲಿ ಶೆ.50 ರಷ್ಟು ಹಾಸಿಗೆ ಮೀಸಲು:

ಕೋವಿಡ್-19 ಸೋಂಕಿತರ ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗಳಲ್ಲಿ ಶೇ. 50 ಹಾಸಿಗೆ ಮೀಸಲಿಡಲು ರಾಜ್ಯ ಸರ್ಕಾರ ಆದೇಶಿಸಿದೆ. ಅದರಂತೆ ನಗರದ ಖಾಸಗಿ ಆಸ್ಪತ್ರೆಗಳಲ್ಲಿ ಶೇ. 50 ಹಾಸಿಗೆ ಕೋವಿಡ್ ಹಾಗೂ ಶೇ.50 ಸಾಮಾನ್ಯ ರೋಗಿಗಳಿಗೆ ಮೀಸಲಿರಿಸಬೇಕೆಂಬ ಸೂಚನೆ ಇದೆ. ಅಲ್ಲದೆ ಸಣ್ಣ-ಸಣ್ಣ/ಕಡಿಮೆ ಹಾಸಿಗೆಗಳಿರುವ 5 ರಿಂದ 10 ಆಸ್ಪತ್ರೆಗಳು ಒಟ್ಟಿಗೆ ಬಂದು ಉದಾಹರಣೆಗೆ 200 ಹಾಸಿಗೆಗಳಿದ್ದಲ್ಲಿ ಅದರಲ್ಲಿ ಕೆಲ ಆಸ್ಪತ್ರೆಗಳನ್ನು ಕೋವಿಡ್ ಚಿಕಿತ್ಸೆಗಾಗಿ ಹಾಸಿಗೆಗಳನ್ನು ನೀಡಿ, ಉಳಿದ ಆಸ್ಪತ್ರೆಗಳಲ್ಲಿ ಸಾಮಾನ್ಯ ರೋಗಿಗಳಿಗೆ ಚಿಕಿತ್ಸೆ ನೀಡುವಂತೆಯೂ ಸೂಚನೆ ನೀಡಲಾಗಿದೆ. ಪ್ರತಿಯೊಬ್ಬ ಬಡವರಿಗೂ ಹಾಸಿಗೆ ಲಭ್ಯವಾಗಬೇಕು. ಆ ದೃಷ್ಟಿಯಲ್ಲಿ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ. ಒಂದು ವೇಳೆ ಹಾಸಿಗೆ ಮೀಸಲಿಡದಿದ್ದರೆ ಕಠಿಣವಾದ ಕ್ರಮ ತೆಗೆದುಕೊಳ್ಳುವುದು. ಈಗಾಗಲೇ ಸೆಂಟ್ ಮಾರ್ಥಾಸ್ ಆಸ್ಪತ್ರೆ(ನೃಪತುಂಗ ರಸ್ತೆ), ರಂಗದೋರ್ ಮೆಮೋರಿಯಲ್ ಆಸ್ಪತ್ರೆ(ಶಂಕರಪುರಂ), ಶಿಫಾ ಆಸ್ಪತ್ರೆ(ಕ್ವೀನ್ಸ್ ರಸ್ತೆ) ಹಾಗೂ ಪೋರ್ಟಿಸ್ ಆಸ್ಪತ್ರೆ(ಕನ್ನಿಂಗ್‌ಹ್ಯಾಮ್ ರಸ್ತೆ)ಗಳಿಗೆ ವಿಪತ್ತು ನಿವರ್ಹಣಾ ಕಾಯ್ದೆ ಅಡಿ ದೂರು ದಾಖಲಿಸಲು ಅಧಿಕಾರಿಗಳಿಗೆ ಆದೇಶ ನೀಡಲಾಗಿದೆ ಎಂದು ತಿಳಿಸಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**